ಸಿ.ಮಿಸ್. 927/2025 ಪಿಡಬ್ಲ್ಯೂಃ1

ದಿನಾಂಕಃ 17.07.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ

ಈ ಅರ್ಜಿಯಲ್ಲಿ ನಾನು 1ನೇ ಅರ್ಜಿದಾರನಾಗಿದ್ದು, ಇಂದು ನಾನು ನ್ಯಾಯಾಲಯಕ್ಕೆ ಸಲ್ಲಿಸಿರುವ ಸಾಕ್ಷ್ಯ ಪ್ರಮಾಣಪತ್ರದ ಎಲ್ಲಾ ವಿಚಾರಗಳು ಸತ್ಯವಾಗಿವೆ. ನಾನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ. ಈ ಕೆಳಕಂಡ ದಾಖಲಾತಿಗಳನ್ನು ಹಾಜರು ಮಾಡಿರುತ್ತೇನೆ.

ಅಲಭ್ಯ ಪ್ರಮಾಣಪತ್ರವನ್ನು ಹಾಜರು ಮಾಡಿದ್ದು ಅದನ್ನು ನಿಪಿಃ1 ಎಂದು ಗುರುತಿಸಲಾಯಿತು. ನನ್ನ ಕುಟುಂಬದ ವಂಶವೃಕ್ಷದ ನೋಟರೀ ಪ್ರಮಾಣಪತ್ರವನ್ನು ಹಾಜರು ಮಾಡಿದ್ದು, ಅದನ್ನು ನಿಪಿಃ2 ಎಂದು ಗುರುತಿಸಲಾಯಿತು. ಹತ್ತು ಆಧಾರ್ ಕಾರ್ಡ್ ನ ನೋಟರೀ ದೃಢೀಕೃತ ಪ್ರತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿಃ3 ರಿಂದ 12 ಎಂದೂ, ಎರಡು ಪತ್ರಿಕಾ ಪ್ರಕಟಣೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿಃ 13 ಮತ್ತು 14 ಎಂದು ಗುರುತಿಸಲಾಯಿತು. ಕೊತ್ತಲವಾಡಿಯಲ್ಲಿರುವ ಜಂಜರ್ ನಂಬರ್ 314 ರ ನನ್ನ ತಂದೆ ಮತ್ತು ತಾಯಿಯ ಹೆಸರಿನಲ್ಲಿರುವ ಖಾತೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ–15 ಎಂದು ಗುರುತಿಸಲಾಯಿತು.

ಅರ್ಜಿಯಲ್ಲಿ ಕೇಳಿದಂತೆ ಆದೇಶ ಮಾಡುವಂತೆ ಕೇಳಿಕೊಳ್ಳುತ್ತೇನೆ.

ಪಾಟೀಸವಾಲುಃ ಎದುರುದಾರರು ಏಕಪಕ್ಷೀಯವಾದ ಕಾರಣ ಪಾಟೀಸವಾಲು ಇಲ್ಲಾ ಎಂದು ಪರಿಗಣಿಸಲಾಯಿತು.

(ನನ್ನ ಉಕ್ತ ಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸ ಇ ಒ.,

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ಚಾಮರಾಜನಗರ.